ಓ.ಎಸ್. ನಂ. 33/2019
ಡಿ.ಡಬ್ಲ್ಯೂ- 1

(ಇಂದು ದಿಃ 12-12-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು)

ಪಾಟೀ ಸವಾಲು :- ಶ್ರೀ. ಆರ್,ಎಮ್. ವಕೀಲರಿಂದ :-

ದಾವಾ ಸ್ವತ್ತುಗಳು ಹಿರಿಯ ಆಸ್ತಿಗಳು ಎಂದರೆ ಸರಿಯಲ್ಲ. ಸಾಕ್ಷಿ ಮುಂದುವರೆದು ದಾವಾ ಐಟಂ ನಂ. 2 ಮಾತ್ರ ಹಿರಿಯ ಆಸ್ತಿ ಎಂದು ಹೇಳುತ್ತಾರೆ ದಾವಾ ಐಟಂ ನಂ. 3 ಜಂಟಿ ಕುಟುಂಬದ ಆಸ್ತಿ ಎಂದರೆ ಸರಿಯಲ್ಲ. ಸದರಿ ಜಮೀನಿನಲ್ಲಿ ಪ್ಲಾಟ ಮಾಡಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಮತ್ತು ನನ್ನ ಸಹೋದರರು ಇಲ್ಲಿಯವರೆಗೆ ಭಾಗ ಆಗಿಲ್ಲ. ದಾವಾ ಐಟಂ. 3 ರಲ್ಲಿ ವಾದಿಗೆ ಭಾಗ ಕೊಡಬೇಕಾಗುತ್ತದೆ ಎಂಬ ಕಾರಣಕ್ಕೆ ಸದರಿ ಸ್ವತ್ತು ನನ್ನ ಸ್ವಯಾರ್ಜಿತ ಸ್ವತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಡಿ-1 ರಿಂದ 6 ದಾಖಲಾತಿಗಳಿಗೂ ಈ ದಾವೆಗೂ ಮತ್ತು ನನಗೂ ಸಂಬಂಧ ಇಲ್ಲಾ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ಬ್ಯಾಂಕ ಅಕೌಂಟ ಸ್ಟೇಟಮೆಂಟ ಸುಳ್ಳು ಎಂದರೆ ಸರಿಯಲ್ಲ. ದಾವಾ ಐಟಂ ನಂ. 3 ನಾನು ಸ್ವಂತ ಖರಿದಿ ಮಾಡಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಸ್ವಂತ ಆದಾಯ ಇತ್ತು ಅದರಿಂದ ದಾವಾ ಐಟಂ ನಂ. 3 ನ್ನು ಕೊಂಡುಕೊಂಡಿದ್ದೇನೆ ಎಂದು ತೋರಿಸಲು ದಾಖಲಾತಿ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಾನು ಸುಳ್ಳು ಪ್ರಮಾಣ ಪತ್ರ ಸಲ್ಲಿಸಿ ಸುಳ್ಳು ಸಾಕ್ಷ್ಯಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆ ಇಲ್ಲ.
(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ. ಹೇ. ಕೇ. ಸರಿ. ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು,
ಸೇಡಂ.